**Akashvani : Bangalore**
**Regional Bulletin In Kannada**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
**05.09.2026 / 18.40 hrs**
**<><*<><>*><>**

<u>ಮುಖ್ಯಾಂಶಗಳು</u>

**೧. ಎರಡನೇ ಪಟ್ಟಿಯಲ್ಲಿ ೫೦ಕ್ಕೂ ಹೆಚ್ಚು ತಾಲೂಕುಗಳು ಬರಪೀಡಿತ ಎಂದು ಘೋಷಣೆ - ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್**

**೨. ಬೆಂಗಳೂರು-ತುಘಲಕ್‌ಬಾದ್ ಕಂಟೈನರ್ ರೈಲ್ವೆ ಸೇವೆಗೆ ಕೇಂದ್ರ ಸಚಿವ ವಿ.ಸೋಮಣ್ಣ ಚಾಲನೆ**

**೩. ಯುವಕರ ಭವಿಷ್ಯದ ವಿಷಯದಲ್ಲಿ ರಾಜೀ ಮಾಡಿಕೊಳ್ಳುವುದಿಲ್ಲ - ಗೃಹ ಸಚಿವ ಪ್ರಿಯಾಂಕ್ ಖರ್ಗೆ ಸ್ಪಷ್ಟನೆ**

**೪. ರಾಜ್ಯದ ನಾಲ್ವರು ಸಾಧಕರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ರಾಷ್ಟ್ರೀಯ ಶಿಕ್ಷಕರ ಪ್ರಶಸ್ತಿ ಪ್ರದಾನ**

**೫. ಹಿರಿಯ ಸಾಹಿತಿ ಡಾ.ಎಸ್.ಎಲ್.ಬೈರಪ್ಪ ಕೊಡುಗೆ ಸ್ಮರಿಸಿದ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್**

**<><*<><>*><>**

ರಾಜ್ಯದ ಜನರ ಕಷ್ಟಕ್ಕೆ ಸ್ಪಂದಿಸುವಂತೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಕೂಡ್ಲಿಗಿಯಲ್ಲಿಂದು ಪ್ರಜಾಸೇವೆ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಪ್ರತಿ ಜಿಲ್ಲಾ ಉಸ್ತುವಾರಿ ಸಚಿವರು ಜಿಲ್ಲೆಯ ಎಲ್ಲಾ ತಾಲೂಕುಗಳಿಗೆ ಪ್ರತಿ ತಿಂಗಳ ಮೊದಲ ಹಾಗೂ ಮೂರನೇ ಶನಿವಾರ ಭೇಟಿ ನೀಡಬೇಕು ಎಂದು ನಿರ್ದೇಶನ ನೀಡಿದ್ದಾರೆ. ಪಿಂಚಣಿ, ಭೂಮಿ ಗ್ಯಾರಂಟಿ, ಖಾತೆ ಸಮಸ್ಯೆ, ನಿವೇಶನ ಹಾಗೂ ಮನೆ ರಹಿತರು, ಸರ್ಕಾರಿ ಯೋಜನೆಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪ್ರಜಾಸೇವೆ ಇಲಾಖೆ ಮೂಲಕ ಬಗೆಹರಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಈಗಾಗಲೇ ರಾಜ್ಯದ ೧೦೨ ತಾಲೂಕುಗಳನ್ನು ಬರಪೀಡಿತ ಎಂದು ಘೋಷಣೆ ಮಾಡಲಾಗಿದ್ದು, ೨ನೇ ಪಟ್ಟಿ ಮೂಲಕ ೫೦ಕ್ಕೂ ಹೆಚ್ಚು ತಾಲೂಕುಗಳನ್ನು ಬರಪ್ರದೇಶ ಎಂದು ಘೋಷಣೆ ಮಾಡಲಾಗುವುದು ಎಂದು ಅವರು ತಿಳಿಸಿದ್ದಾರೆ.

**<><*<><>*><>**

ರಾಜ್ಯದ ಇತರ ಜಿಲ್ಲೆಗಳಲ್ಲೂ ಇಂದು ಪ್ರಜಾಸೇವೆ ಅಭಿಯಾನಕ್ಕೆ ಚಾಲನೆ ನೀಡಲಾಯಿತು. ತುಮಕೂರಿನಲ್ಲಿ ಪ್ರಜಾಸೇವಾ ಅಭಿಯಾನ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಸೂರಿಲ್ಲದವರಿಗೆ ಸೂರು ಒದಗಿಸುವುದು ಸರ್ಕಾರದ ಆಶಯವಾಗಿದೆ. ಇದಕ್ಕಾಗಿ ರಾಜ್ಯಾದ್ಯಂತ ೧೫ ಲಕ್ಷಕ್ಕೂ ಹೆಚ್ಚು ನಿವೇಶನ ನೀಡಲಾಗುವುದು ಎಂದು ತಿಳಿಸಿದ್ದಾರೆ. ಸರ್ಕಾರಿ ಕಚೇರಿಗಳಿಗೆ ಜನರ ಅಲೆದಾಟ ತಪ್ಪಿಸುವ ದೃಷ್ಟಿಯಿಂದ ಕಾನೂನು ಚೌಕಟ್ಟಿನಲ್ಲಿ ಸ್ಥಳೀಯ ಜನರ ಸಮಸ್ಯೆಗಳನ್ನು ಸ್ಥಳದಲ್ಲೇ ಇತ್ಯರ್ಥಪಡಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ್ ವಿಜಯಪುರದಲ್ಲಿಂದು ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಜನಸಾಮಾನ್ಯರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಿ, ಸರ್ಕಾರದ ಸೇವೆಗಳನ್ನು ಜನರ ಮನೆ ಬಾಗಿಲಿಗೇ ತಲುಪಿಸುವ ಉದ್ದೇಶದಿಂದ ಪ್ರಜಾ ಸೇವೆ ಆಂದೋಲನವನ್ನು ರಾಜ್ಯದಲ್ಲಿ ಜಾರಿಗೆ ತರಲಾಗಿದೆ ಎಂದು ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಹೇಳಿದ್ದಾರೆ. ದೇಶದಲ್ಲೇ ಪ್ರಥಮ ಬಾರಿಗೆ ಕರ್ನಾಟಕದಲ್ಲಿ ಈ ರೀತಿಯ ವ್ಯವಸ್ಥೆಯನ್ನು ರೂಪಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ. ಚನ್ನಪಟ್ಟಣದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಇಂದು ರಾಮನಗರ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಸಿ.ಬಾಲಕೃಷ್ಣ ಪ್ರಜಾಸೇವೆ ಆಂದೋಲನಕ್ಕೆ ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿದರು. ರಾಜ್ಯದ ಎಲ್ಲಾ ಜಿಲ್ಲೆಗಳ ತಾಲೂಕು ಕೇಂದ್ರಗಳಲ್ಲಿ ಪ್ರತಿ ಮೊದಲನೇ ಹಾಗೂ ಮೂರನೇ ಶನಿವಾರದಂದು ಆಯಾ ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಪ್ರಜಾ ಸೇವಾ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ತಿಳಿಸಿದ್ದಾರೆ. ಮಹತ್ವಾಕಾಂಕ್ಷೆಯ ಪ್ರಜಾಸೇವೆ ಆಂದೋಲನದ ಕಾರ್ಯಕ್ರಮವು ಕೇವಲ ರಾಜಧಾನಿ ಬೆಂಗಳೂರು ನಗರಕ್ಕೆ ಮಾತ್ರ ಸೀಮಿತವಾಗದೆ, ರಾಜ್ಯದ ಪ್ರತಿಯೊಂದು ಜಿಲ್ಲಾ ಹಾಗೂ ತಾಲೂಕು ಹಾಗೂ ಹೋಬಳಿ ಮಟ್ಟದಲ್ಲಿ ಆಡಳಿತ ವ್ಯವಸ್ಥೆಯನ್ನು ಜನರಿಗೆ ಮತ್ತಷ್ಟು ಹತ್ತಿರವಾಗಿಸಲಿದೆ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಅಜಯ್ ಧರ್ಮಸಿಂಗ್ ಹೇಳಿದ್ದಾರೆ. ಇಂದಿನಿಂದ ಆರಂಭವಾಗಿರುವ ಪ್ರಜಾಸೇವಾ ಇಲಾಖೆಯ ಮೂಲಕ ಸಾರ್ವಜನಿಕರ ಅರ್ಜಿಗಳು ವಿಲೇವಾರಿಗೊಂಡು ತಾರ್ಕಿಕ ಅಂತ್ಯ ಕಾಣಲಿವೆ ಎಂದು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಜಿ.ಪ್ರಭು ತಿಳಿಸಿದ್ದಾರೆ.

<><*<><>*><>

ರಾಜ್ಯದಲ್ಲಿ ಈ ಬಾರಿ ಬರಗಾಲ ಆವರಿಸಿದ್ದು, ಮಾಸಾಂತ್ಯದ ವೇಳೆಗೆ ೧೮೦ರಿಂದ ೨೦೦ ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸುವ ಸಾಧ್ಯತೆಯಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ್ ಬಿ.ಖಂಡ್ರೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ನಾಯಕರು ಕೇಂದ್ರ ಸರ್ಕಾರದಿಂದ ಬರ ಪರಿಹಾರ ಕೇಳದೇ ಪಾದಯಾತ್ರೆಯಲ್ಲಿ ಕಾಲಹರಣ ಮಾಡುತ್ತಿದ್ದಾರೆ ಎಂದು ದೂರಿದ್ದಾರೆ.

ಎನ್‌ಡಿಆರ್‌ಎಫ್‌ನಿಂದ ಒಣಭೂಮಿ ಮತ್ತು ನೀರಾವರಿ ಭೂಮಿಗೆ ಪರಿಹಾರವನ್ನು ನೀಡಲು ನಿರ್ಧರಿಸಲಾಗಿದೆ. ಜೊತೆಗೆ ತೀವ್ರ ಬೆಳೆಹಾನಿಯಾಗಿರುವ ಪ್ರದೇಶಕ್ಕೆ ಹೆಚ್ಚುವರಿ ಪರಿಹಾರ ನೀಡುವ ಬಗ್ಗೆ ಮುಖ್ಯಮಂತ್ರಿ ನಿರ್ಧಾರ ಕೈಗೊಳ್ಳಲಿದ್ದಾರೆ ಎಂದು ಈಶ್ವರ್ ಖಂಡ್ರೆ ತಿಳಿಸಿದ್ದಾರೆ. ಪ್ರಸ್ತುತ ಬರಪೀಡಿತ ಎಂದು ಘೋಷಿಸಲಾಗಿರುವ ತಾಲೂಕುಗಳಿಗೆ ಕೇಂದ್ರ ಸರ್ಕಾರ ೨ ಸಾವಿರದ ೬೦೦ ಕೋಟಿ ರೂಪಾಯಿ ನೀಡಬೇಕು ಎಂಬುದು ರಾಜ್ಯದ ಬೇಡಿಕೆಯಾಗಿದೆ ಎಂದು ಹೇಳಿದ್ದಾರೆ.

**<><*<><>*><>**

ದೇಶೀಯ ಸರಕು-ಸಾಗಾಣೆಯನ್ನು ಬಲಪಡಿಸುವ ಉದ್ದೇಶದಿಂದ ಬೆಂಗಳೂರಿನ ವೈಟ್‌ಫೀಲ್ಡ್‌ನಿಂದ ನವದೆಹಲಿಯ ತುಘಲಕ್‌ಬಾದ್‌ಗೆ ಕಂಟೈನರ್ ರೈಲು ಸೇವೆಗೆ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಬೆಂಗಳೂರಿನಲ್ಲಿ ಇಂದು ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು, ದಕ್ಷಿಣ ಭಾರತದಲ್ಲಿ ಇದು ಮೊಟ್ಟ ಮೊದಲ ಉಪಕ್ರಮವಾಗಿದ್ದು, ಬೆಂಗಳೂರು, ತುಮಕೂರು, ಹೊಸೂರು, ಕೋಲಾರ, ಕೃಷ್ಣಗಿರಿ ಮತ್ತು ಸುತ್ತಮುತ್ತಲ ಸ್ಥಳಗಳ ಕೈಗಾರಿಕೆಗಳಿಗೆ ಕಚ್ಚಾವಸ್ತುಗಳು ಹಾಗೂ ಸಿದ್ಧಪಡಿಸಿದ ಸರಕುಗಳ ಸುರಕ್ಷಿತ ಸಾಗಾಣೆ ಹಾಗೂ ದೊಡ್ಡ ಮಾರುಕಟ್ಟೆಗಳ ಪ್ರವೇಶಕ್ಕೆ ಪ್ರಯೋಜನಕಾರಿಯಾಗಿದೆ ಎಂದು ತಿಳಿಸಿದ್ದಾರೆ. ರಾಜ್ಯದ ಹಲವು ಉದ್ಯಮಗಳಿಗೆ ಇದು ವರದಾನವಾಗಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

**<><*<><>*><>**

ಯುವಕರ ಭವಿಷ್ಯದ ವಿಷಯದಲ್ಲಿ ರಾಜೀ ಮಾಡಿಕೊಳ್ಳುವುದಿಲ್ಲ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಸ್ಪಷ್ಟಪಡಿಸಿದ್ದಾರೆ. ಕಲಬುರಗಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಪಿಎಸ್‌ಸಿ ಪರೀಕ್ಷಾ ಅಕ್ರಮದಲ್ಲಿ ಭಾಗಿಯಾಗಿರುವ ಯಾರನ್ನು ರಕ್ಷಿಸುವ ಪ್ರಶ್ನೆಯೇ ಇಲ್ಲ ಎಂದು ತಿಳಿಸಿದ್ದಾರೆ. ಪರೀಕ್ಷಾ ಅಕ್ರಮಗಳಲ್ಲಿ ಭಾಗಿಯಾಗಿರುವವರ ವಿರುದ್ಧ ಕಠಿಣಕ್ರಮ ಕೈಗೊಳ್ಳಲಾಗುವುದು. ಸರ್ಕಾರ ೬೦ ಸಾವಿರ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆ ಆರಂಭಿಸಿದ್ದು, ಸುಮಾರು ೩೫ ಲಕ್ಷ ಅಭ್ಯರ್ಥಿಗಳು ಪರೀಕ್ಷೆಗಳಿಗೆ ಹಾಜರಾಗಿದ್ದಾರೆ. ಎಲ್ಲ ಅಭ್ಯರ್ಥಿಗಳ ಹಿತಾಸಕ್ತಿಯನ್ನು ರಕ್ಷಿಸುವುದು ಸರ್ಕಾರದ ಜವಾಬ್ದಾರಿಯಾಗಿದೆ ಎಂದು ಹೇಳಿದ್ದಾರೆ. ಇದೇ ವೇಳೆ ಜೈಲುಗಳ ಸುಧಾರಣೆ ಕುರಿತು ಮಾತನಾಡಿದ ಅವರು, ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ ಆರ್.ಹಿತೇಂದ್ರ ನೇತೃತ್ವದ ಉನ್ನತಮಟ್ಟದ ಸಮಿತಿಯು ಜೈಲುಗಳ ಆಡಳಿತ, ಭದ್ರತೆ ಮತ್ತು ಸುಧಾರಣೆಗಳ ಕುರಿತು ಈಗಾಗಲೇ ತನ್ನ ವರದಿ ಸಲ್ಲಿಸಿದೆ. ಮುಖ್ಯಮಂತ್ರಿ ಜೊತೆ ಚರ್ಚಿಸಿ ಶಿಫಾರಸ್ಸುಗಳನ್ನು ಜಾರಿಗೆ ತರಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

**<><*<><>*><>**

ಶಿಕ್ಷಕರ ದಿನಾಚರಣೆ ಹಿನ್ನೆಲೆಯಲ್ಲಿ ನವದೆಹಲಿಯಲ್ಲಿಂದು ನಡೆದ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಒಟ್ಟು ೮೨ ಸಾಧಕ ಶಿಕ್ಷಕರಿಗೆ ೨೦೨೩ರ ರಾಷ್ಟ್ರೀಯ ಶಿಕ್ಷಕರ ಪ್ರಶಸ್ತಿ ಪ್ರದಾನ

ಮಾಡಿದರು. ರಾಜ್ಯದಿಂದ ಶಿವಮೊಗ್ಗದ ರತ್ನಕುಮಾರಿ.ಎಸ್ ಗ್ರಾಮೀಣ ಶಿಕ್ಷಣದಲ್ಲಿ ಕ್ರಾಂತಿಕಾರಿ ಬದಲಾವಣೆ ತಂದ ಹಿನ್ನೆಲೆಯಲ್ಲಿ ಉತ್ತಮ ಶಿಕ್ಷಕಿ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಬೆಂಗಳೂರಿನ ಎಂ.ಇ.ಐ ಪಾಲಿಟೆಕ್ನಿಕ್‌ನ ಉಪಪ್ರಾಂಶುಪಾಲ ಹಾಗೂ ಸಿವಿಲ್ ಎಂಜಿನಿಯರಿಂಗ್ ವಿಭಾಗದ ಮುಖ್ಯಸ್ಥರಾದ ಡಾ.ವಿಶ್ವನಾಥ.ಎಚ್.ಎಸ್ ಹಾಗೂ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಪ್ರೊಫೆಸರ್ ಶಿವಾನಿ.ವಿ ಮತ್ತು ಬೆಂಗಳೂರಿನ ಇಂದಿರಾ ನಗರದ ಖಾಸಗಿ ಶಾಲೆಯ ಶಿಕ್ಷಕಿ ರಾಧಾ ರಾಜೇಶ್ ಉತ್ತಮ ಶಿಕ್ಷಕರ ಪ್ರಶಸ್ತಿ ಪಡೆದುಕೊಂಡಿದ್ದಾರೆ.

<><*<><>*><>

ಕನ್ನಡದ ಹಿರಿಯ ಲೇಖಕ ಹಾಗೂ ಚಿಂತಕ ಡಾ.ಎಸ್.ಎಲ್.ಭೈರಪ್ಪ ಅವರ ಕೊಡುಗೆಯನ್ನು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಶ್ಲಾಘಿಸಿದ್ದಾರೆ. ನವದೆಹಲಿಯಲ್ಲಿ ನಡೆದ ಐತಿಹಾಸಿಕ ಮತ್ತು ಸಾಂಸ್ಕೃತಿಕ ಸಂಶೋಧನಾ ಪ್ರತಿಷ್ಠಾನ ಹಮ್ಮಿಕೊಂಡಿರುವ ವಾರ್ಷಿಕ ಇತಿಹಾಸ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಅವರು, ಬೌದ್ಧಿಕ ವಿಚಾರಣೆಯ ಅನ್ವೇಷಣೆಯು ಭಾರತದ ಪುರಾತನ ನಾಗರಿಕತೆಗೆ ಅತ್ಯವಶ್ಯಕವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಭಾರತವು ಒಟ್ಟಾಗಿ ಬೌದ್ಧಿಕ ಸ್ವರಾಜ್ಯದ ಸುವರ್ಣ ಯುಗದತ್ತ ಸಾಗಬೇಕು ಎಂದು ಅವರು ತಿಳಿಸಿದ್ದಾರೆ.

<><*<><>*><>

ಯಶವಂತಪುರ-ಮಂಗಳೂರು ವಂದೇ ಭಾರತ್ ಎಕ್ಸ್‌ಪ್ರೆಸ್‌ನ ಮೊದಲ ಪ್ರಾಯೋಗಿಕ ಸಂಚಾರ ಇಂದು ಯಶಸ್ವಿಯಾಗಿ ಆರಂಭಗೊಂಡಿದೆ. ನೈಋತ್ಯ ರೈಲ್ವೆಯು, ಪಶ್ಚಿಮ ಘಟ್ಟದ ಮಾರ್ಗದಲ್ಲಿ ರೈಲಿನ ವೇಗ, ಸುರಕ್ಷತೆ ಮತ್ತು ವೇಳಾಪಟ್ಟಿಯನ್ನು ಪರಿಶೀಲಿಸುತ್ತಿದೆ. ೧೬ ಬೋಗಿಗಳ ಅತ್ಯಾಧುನಿಕ ವಂದೇ ಭಾರತ್ ರೈಲಿನ ವೇಳಾಪಟ್ಟಿ ವೇಗ ಹಾಗೂ ಕಾಲಮಿತಿಯನ್ನು ಪರಿಶೀಲಿಸಲು ಈ ಪ್ರಾಯೋಗಿಕ ಸಂಚಾರ ಆಯೋಜಿಸಲಾಗಿದೆ. ಕಳೆದ ತಿಂಗಳು ಪಶ್ಚಿಮ ಘಟ್ಟದ ಹಸಿರುಘಾಟ್ ಮಾರ್ಗದಲ್ಲಿ ಸ್ವಯಂ ಚಾಲಿತ ತುರ್ತು ಬ್ರೇಕಿಂಗ್ ಸಿಸ್ಟಮ್‌ಅನ್ನು ಯಶಸ್ವಿಯಾಗಿ ಪರೀಕ್ಷಿಸಲಾಗಿತ್ತು. ಕಡಿದಾದ ಭೂಪ್ರದೇಶದಲ್ಲಿನ ರೈಲಿನ ಸುರಕ್ಷತೆ, ವೇಗ ಹಾಗೂ ಸುಗಮ ಸಂಚಾರ ಖಚಿತಪಡಿಸಿಕೊಂಡ ಬಳಿಕವೇ ಸಾರ್ವಜನಿಕ ಸೇವೆಗೆ ಅಧಿಕೃತ ಚಾಲನೆ ನೀಡಲು ರೈಲ್ವೆ ಅಧಿಕಾರಿಗಳು ವೇಳಾಪಟ್ಟಿಯನ್ನು ಅಂತಿಮಗೊಳಿಸುತ್ತಿದ್ದಾರೆ.

<><*<><>*><>

ಬಾಗಲಕೋಟೆಯ ನವನಗರದಲ್ಲಿ ಸ್ಥಾಪನೆಯಾಗುತ್ತಿರುವ ಬಾಗಲಕೋಟೆ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಗೆ ಪ್ರಸಕ್ತ ಶೈಕ್ಷಣಿಕ ವರ್ಷದಿಂದ ೧೦೦ ಎಂಬಿಬಿಎಸ್ ಸೀಟುಗಳ ಪ್ರವೇಶಕ್ಕೆ ರಾಷ್ಟ್ರೀಯ ವೈದ್ಯಕೀಯ ಆಯೋಗ ಅನುಮತಿ ನೀಡಿದೆ. ಸೆಪ್ಟೆಂಬರ್ ಇರಂದು ಹೊರಡಿಸಿರುವ ಅನುಮತಿ ಪತ್ರದಲ್ಲಿ, ಪ್ರಸಕ್ತ ಶೈಕ್ಷಣಿಕ ಸಾಲಿಗೆ ವಾರ್ಷಿಕ ೧೦೦ ಎಂಬಿಬಿಎಸ್

ವಿದ್ಯಾರ್ಥಿಗಳ ಪ್ರವೇಶಕ್ಕೆ ಅನುಮತಿ ನೀಡಿರುವುದನ್ನು ಸ್ಪಷ್ಟಪಡಿಸಿದೆ. ಕಾಲೇಜು ಆರಂಭಕ್ಕೆ ಸಂಬಂಧಿಸಿದಂತೆ ಸಲ್ಲಿಸಿದ್ದ ಅರ್ಜಿಯನ್ನು ಪರಿಶೀಲಿಸಿದ ಎನ್‌ಎಂಸಿ, ಆರಂಭದಲ್ಲಿ ಅನುಮತಿ ನಿರಾಕರಿಸಿತ್ತು. ಎರಡನೇ ಮೇಲ್ಮನವಿ ಸಮಿತಿಯ ನಿರ್ಧಾರದ ಅನ್ವಯ ಅಗತ್ಯ ಕ್ರಮಗಳನ್ನು ಕೈಗೊಂಡ ಹಿನ್ನೆಲೆಯಲ್ಲಿ ಇದೀಗ ಅನುಮತಿ ಪತ್ರ ನೀಡಲಾಗಿದೆ.

**<><*<><>*><>**

ಒಕ್ಕೂಟ ವ್ಯವಸ್ಥೆಯಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಒಗ್ಗಟ್ಟಿನಿಂದ ಕೆಲಸ ಮಾಡಿ ರೈತರ ಸಮಸ್ಯೆ, ನೀರಾವರಿ ಸಮಸ್ಯೆ ಸೇರಿದಂತೆ ರಾಜ್ಯದ ಜ್ವಲಂತ ಸಮಸ್ಯೆಗಳನ್ನು ಬಗೆಹರಿಸಬೇಕು ಎಂದು ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ.ಶಿವಲಿಂಗೇಗೌಡ ಹಾಸನದಲ್ಲಿ ಇಂದು ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**